**Bangalore**
**Regional News**
**10.01.2026 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ದ್ವೇಷ-ಭಾಷಣ ಮಸೂದೆ ಕುರಿತಂತೆ ರಾಜ್ಯಪಾಲರಿಗೆ ವಿವರಣೆ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಧಾರ

೨. ದೇಶದ ಸುರಕ್ಷಿತ ನಗರಗಳಲ್ಲಿ ಬೆಂಗಳೂರಿಗೆ ಮೊದಲ ಸ್ಥಾನ - ಗೃಹ ಸಚಿವ ಡಾ. ಜಿ. ಪರಮೇಶ್ವರ್

೩. ಖೇಲೋ ಇಂಡಿಯಾ ಯೋಜನೆಯಡಿ ಮಂಡ್ಯ ಜಿಲ್ಲೆಗೆ ಒಳಾಂಗಣ ಕ್ರೀಡಾಂಗಣ ಕೇಂದ್ರ ಸರ್ಕಾರಕ್ಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಧನ್ಯವಾದ

೪. ವಿಕಸಿತ ಭಾರತ ಜಿ-ರಾಮ್-ಜಿ ವಿರುದ್ಧ ಹೋರಾಟಕ್ಕೆ ರಾಜ್ಯ ಸರ್ಕಾರ ನಿರ್ಧಾರ ; ಯೋಜನೆ ಬಗ್ಗೆ ಅಪಪ್ರಚಾರ ಸಲ್ಲದು; ಪರಿಷತ್ ಸದಸ್ಯ ಸಿ.ಟಿ. ರವಿ

೫. ಯುವನಿಧಿಗೆ ೪೮ ಸಾವಿರ ಇಂಜಿನಿಯರಿಂಗ್ ವಿದ್ಯಾರ್ಥಿಗಳ ನೋಂದಣಿ ; ವಿಟಿಯು ಕುಲಪತಿ ಡಾ.ಎಸ್.ವಿದ್ಯಾಶಂಕರ್ ಕಳವಳ

**<><*<><>*><>**

ರಾಜ್ಯಕ್ಕೆ ಎಷ್ಟೇ ಅನ್ಯಾಯವಾದರೂ ಕೇಂದ್ರ ಸರ್ಕಾರದ ನಿರ್ಧಾರಗಳನ್ನು ಬಿಜೆಪಿ ನಾಯಕರು ಸಮರ್ಥಿಸಿಕೊಳ್ಳುವುದು ಮಹಾತಪ್ಪು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿಂದು ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಅಭಿಯೋಜನಾಧಿಕಾರಿಗಳ ಸಂಘ ಆಯೋಜಿಸಿದ್ದ ತರಬೇತಿ ಕಾರ್ಯಾಗಾರ ಹಾಗೂ ೧೭ನೇ ರಾಜ್ಯ ಮಟ್ಟದ ಸಮ್ಮೇಳನವನ್ನು ಉದ್ಘಾಟಿಸಿದ ಬಳಿಕ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮನ್ರೇಗಾ ಕಾಯ್ದೆ ಕುರಿತಂತೆ ಚರ್ಚೆಗೆ ಸಿದ್ಧ ಎಂದು ತಿಳಿಸಿದ್ದಾರೆ. ಇದೇ ವೇಳೆ, ಕೇರಳ ಗಡಿಭಾಗಗಳ ಶಾಲೆಗಳಲ್ಲಿ ಮಲೆಯಾಳಂ ಮೊದಲ ಭಾಷೆಯಾಗಿ ಕಲಿಯುವುದನ್ನು ಕಡ್ಡಾಯಗೊಳಿಸಿರುವ ಕುರಿತಂತೆ ಹೋರಾಟ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಈ ಕುರಿತಂತೆ ಕೇರಳ ಮುಖ್ಯಮಂತ್ರಿಗೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದ್ದಾರೆ. ದ್ವೇಷ ಭಾಷಣ

ಮಸೂದೆ ರಾಜ್ಯಪಾಲರ ಬಳಿಯೇ ಉಳಿದಿರುವ ಬಗ್ಗೆ ಪ್ರತಿಕ್ರಿಯಿಸಿ ಈ ಕುರಿತಂತೆ ರಾಜ್ಯಪಾಲರನ್ನು ಭೇಟಿಯಾಗಿ ವಿವರಣೆ ನೀಡಲಾಗುವುದು ಎಂದು ಹೇಳಿದ್ದಾರೆ.

<><*<><>*><>

ಮಹಿಳೆಯರು ವಾಸಿಸಲು ದೇಶದ ಸುರಕ್ಷಿತ ನಗರಗಳಲ್ಲಿ ಬೆಂಗಳೂರು ಮೊದಲ ಸ್ಥಾನವನ್ನು ಪಡೆದುಕೊಂಡಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಇದು ರಾಜ್ಯಕ್ಕೆ ಅತ್ಯಂತ ಹೆಮ್ಮೆಯ ವಿಚಾರ ಎಂದು ತಿಳಿಸಿದ್ದಾರೆ. ಸುರಕ್ಷತೆ, ತಂತ್ರಜ್ಞಾನ, ಮೂಲಸೌಕರ್ಯದಂತಹ ಹಲವಾರು ನಿಯಾತಾಂಕಗಳನ್ನು ಆಧರಿಸಿ ಚೆನ್ನೈ ಮೂಲದ ಸಲಹಾ ಸಂಸ್ತೆಯು ಅತ್ಯುತ್ತಮ ನಗರಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಇದರಲ್ಲಿ ಬೆಂಗಳೂರು ೫೩.೨೯ ಅಂಕಗಳೊಂದಿಗೆ ಅಗ್ರಸ್ಥಾನದಲ್ಲಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಬಳ್ಳಾರಿ ಮತ್ತು ಹುಬ್ಬಳಿ ಪ್ರಕರಣಗಳನ್ನು ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ ಸಿಐಡಿ ತನಿಖೆಗೆ ನೀಡಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಖೇಲೋ ಇಂಡಿಯಾ ಯೋಜನೆಯಡಿ ಮಂಡ್ಯ ಜಿಲ್ಲೆಯಲ್ಲಿ ಬಹುಪಯೋಗಿ ಕ್ರೀಡಾ ಸೌಲಭ್ಯ ನಿರ್ಮಿಸಲು ೧೪ ಕೋಟಿ ರೂಪಾಯಿ ಮಂಜೂರು ಮಾಡಿದ್ದಕ್ಕಾಗಿ ಕೇಂದ್ರ ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯಾ ಅವರಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಧನ್ಯವಾದ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯದ ಕೃಷಿ ವಿಜ್ಞಾನ ವಿಶ್ವ ವಿದ್ಯಾಲಯದಲ್ಲಿ ಬಹುಪಯೋಗಿ ಒಳಾಂಗಣ ಕ್ರೀಡಾ ಸಭಾಂಗಣ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಇದು ಯುವ ಕ್ರೀಡಾಪಟುಗಳಿಗೆ ತರಬೇತಿ ನೀಡಲು ಹಾಗೂ ಸಾರ್ವಜನಿಕರಲ್ಲಿ ಫಿಟ್‌ನೆಸ್ ಉತ್ತೇಜಿಸಲು ಈ ಸೌಲಭ್ಯವು ವಿಶ್ವದರ್ಜೆಯ ಮೂಲಸೌಕರ್ಯ ಒದಗಿಸಲಿದೆ ಎಂದು ಹೇಳಿದ್ದಾರೆ.

<><*<><>*><>

ಕೇಂದ್ರ ಸರ್ಕಾರದ ವಿಕಸಿತ ಭಾರತ ಜಿ-ರಾಮ್-ಜಿ ಕಾಯ್ದೆ ಸಂವಿಧಾನ ವಿರೋಧಿಯಾಗಿದ್ದು, ರಾಜ್ಯ ಸರ್ಕಾರ ಈಗಾಗಲೇ ಕೇಂದ್ರದ ವಿರುದ್ಧ ನಿರ್ಣಯ ಕೈಗೊಂಡಿದೆ. ಜೊತೆಗೆ ಕಾನೂನು ಹೋರಾಟ ರೂಪಿಸುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕಲಬುರಗಿಯಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಕೇಂದ್ರದ ವಿಕಸಿತ ಭಾರತ ಜಿ-ರಾಮ್-ಜಿ ಕಾಯ್ದೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಕಾಯ್ದೆ ಕುರಿತಂತೆ ವಿವರವಾಗಿ ಚರ್ಚಿಸಲು ಎರಡು ದಿನಗಳ ವಿಶೇಷ ಅಧಿವೇಶನ ಕರೆಯಲು ಕೂಡಾ ತೀರ್ಮಾನಿಸಲಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರದ ಹೋರಾಟಕ್ಕೆ ಮಹಿಳಾ

ಸಂಘಟನೆಗಳು, ಕೂಲಿ ಕಾರ್ಮಿಕರ ಸಂಘಟನೆಗಳು ಕೈಜೋಡಿಸಲು ಮುಂದಾಗಿವೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಕಸಿತ ಭಾರತ್ - ರೋಜಗಾರ್ ಮತ್ತು ಅಜೀವಿಕಾ ಮಿಶನ್ ಖಾತರಿ ಕಾರ್ಯಕ್ರಮದ ಬಗ್ಗೆ ಅಪಪ್ರಚಾರ ಸಲ್ಲದು ಎಂದು ವಿಧಾನ ಪರಿಷತ್ ಸದಸ್ಯ ಸಿಟಿ ರವಿ ತಿಳಿಸಿದ್ದಾರೆ. ಹಾಸನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಗ್ರಾಮೀಣ ಭಾಗದಲ್ಲಿ ಜನ ಕೆಲಸ ಅರಸಿ ಗುಳೆ ಹೋಗುವುದನ್ನು ತಪ್ಪಿಸಲು ೧೯೮೯ ರಲ್ಲಿ ಪ್ರಧಾನ ಮಂತ್ರಿ ರೋಸ್ಗಾರ್ ಯೋಜನೆ ಮಾಡಿ ಸ್ಥಳೀಯವಾಗಿಯೇ ಕೆಲಸ ನೀಡಲಾಗುತ್ತಿತ್ತು. ೨೦೦೫ ರಲ್ಲಿ ಕಾಂಗ್ರೆಸ್ ಸರ್ಕಾರ ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಎಂದು ಹೆಸರು ಬದಲಾಯಿಸಿತು. ಕಾಲಕಾಲಕ್ಕೆ ಈ ರೀತಿಯ ಬದಲಾವಣೆಗಳು ಸಹಜ ಎಂದು ಹೇಳಿದ್ದಾರೆ. ಜನರಿಗೆ ಉದ್ಯೋಗ ಜೊತೆಗೆ ಗ್ರಾಮೀಣ ಭಾಗದ ಅಭಿವೃದ್ಧಿಯೂ ಆಗಬೇಕು ಎಂಬುದು ಕೇಂದ್ರ ಸರ್ಕಾರದ ಉದ್ದೇಶವಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ. ಕೆಲಸದ ದಿನಗಳನ್ನು ೧೦೦ ದಿನಗಳಿಂದ ೧೨೫ ದಿನಗಳಿಗೆ ಏರಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಯುವನಿಧಿಗೆ ರಾಜ್ಯದ ೪೮ ಸಾವಿರ ಎಂಜಿನಿಯರಿಂಗ್ ವಿದ್ಯಾರ್ಥಿಗಳು ನೋಂದಣಿ ಮಾಡಿರುವುದು ಕಳವಳಕಾರಿ ಸಂಗತಿ ಎಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ವಿದ್ಯಾಶಂಕರ್ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿಂದು ವಿದ್ಯಾರ್ಥಿಗಳಿಗೆ ಪುನಶ್ಚೇತನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಎಂತಹ ಶಿಕ್ಷಣ ನೀಡಲಾಗುತ್ತಿದೆ ಎಂಬುದನ್ನು ಪ್ರಶ್ನೆ ಮಾಡುವಂತಿದೆ ಎಂದು ಹೇಳಿದ್ದಾರೆ. ಕೌಶಲ್ಯ ಶಿಕ್ಷಣವೇ ಧ್ಯೇಯವಾಗಬೇಕು. ಜೊತೆಗೆ ೪೮ ಸಾವಿರ ವಿದ್ಯಾರ್ಥಿಗಳ ಸಂಖ್ಯೆಯನ್ನು ಶೂನ್ಯಕ್ಕೆ ತನ್ನಿ" ಎಂದು ಸೂಚಿಸಿದ್ದಾರೆ. ಗ್ಲೋಬಲ್ ಅಕಾಡೆಮಿ ಆಫ್ ಟೆಕ್ನಾಲಜಿಯ ಮುಖ್ಯ ತಂತ್ರಗಾರಿಕೆ ಅಧಿಕಾರಿ ನಾಗಮಣಿ ನಾಗರಾಜ್ ಮಾತನಾಡಿ, "ವಿದ್ಯಾರ್ಥಿಗಳಿಗೆ ಆರಂಭದಲ್ಲೇ ಕಲಿಕೆಯ ಶಿಸ್ತು ರೂಢಿಸಬೇಕು, ಜೊತೆಗೆ ಕೌಶಲ್ಯ ಶಿಕ್ಷಣ ನೀಡಬೇಕು ಎಂದು ಹೇಳಿದ್ದಾರೆ.

<><*<><>*><>

ಜ್ಞಾನ ಸಂಪತ್ತಿನ ಪರ್ವತವಾದ ಕರಾವಳಿಯ ಪ್ರಗತಿಯೇ ಸರ್ಕಾರದ ಸಂಕಲ್ಪ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಭಾಗದ ಪ್ರವಾಸ್ಯೋದ್ಯಮ ನೀತಿಗೆ ಜನಪ್ರತಿನಿಧಿಗಳು, ಉದ್ಯಮಿಗಳು, ಅಧಿಕಾರಿಗಳು ಸೇರಿದಂತೆ ಎಲ್ಲರ ಸಲಹೆಗಳನ್ನು ಸ್ವೀಕರಿಸಲು ಸರ್ಕಾರ ಬದ್ಧವಾಗಿದೆ ಎಂದು

ತಿಳಿಸಿದ್ದಾರೆ. ೩೨೦ ಕಿಲೋಮೀಟರ್ ಉದ್ದದ ಕರಾವಳಿ ಸಂಪತ್ತು ಬಳಕೆಯಲ್ಲಿ ರಾಜ್ಯ ಹಿಂದುಳಿದಿದ್ದು, ಈ ಭಾಗಕ್ಕೆ ಪ್ರತಿಯೊಬ್ಬ ಪ್ರವಾಸೋದ್ಯಮ ನೀತಿಯ ಅಗತ್ಯವಿದೆ ಎಂದು ಹೇಳಿದ್ದಾರೆ.

<><*<><>*><>

ಕಳೆದ ಐದು ದಶಕಗಳಲ್ಲಿ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯ ಸಂಸ್ಥೆಯು ನೀತಿ ನಿರೂಪಣೆ ಮತ್ತು ಪುರಾವೆ ಆಧಾರಿತ ಸಂಶೋಧನಾ ಕ್ಷೇತ್ರಗಳಲ್ಲಿ ಗಮನಾರ್ಹ ಕೊಡುಗೆಗಳನ್ನು ನೀಡಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಐಎಸ್‌ಇಸಿ ೫೩ನೇ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, "ಈ ಸಂಸ್ಥೆಯು ನಡೆಸಿದ ಅಧ್ಯಯನಗಳು ಮತ್ತು ವಿಶ್ಲೇಷಣೆಗಳು ಶೈಕ್ಷಣಿಕ ಜಗತ್ತಿಗೆ ಉಪಯುಕ್ತವಾಗಿವೆ ಎಂದು ಹೇಳಿದ್ದಾರೆ. ರಾಜ್ಯ ಸರ್ಕಾರಕ್ಕೆ ಐಎಸ್‌ಇಸಿಯ ಕೊಡುಗೆ ಅನುಕರಣೀಯವಾಗಿದೆ. ವಿಶೇಷವಾಗಿ ದುರ್ಬಲ ವರ್ಗಗಳ ಉನ್ನತಿಗಾಗಿ ನೀತಿಗಳನ್ನು ರೂಪಿಸುವಲ್ಲಿ ಮತ್ತು ಸಾಮಾಜಿಕ ಕಾಳಜಿಯನ್ನು ಉತ್ತೇಜಿಸುವಲ್ಲಿ ಮತ್ತು ಸರ್ಕಾರವು ಜಾರಿಗೆ ತಂದ ನೀತಿಗಳು ಮತ್ತು ಕಾರ್ಯಕ್ರಮಗಳನ್ನು ಮೌಲ್ಯಮಾಪನ ಮಾಡುವಲ್ಲಿ ಈ ಸಂಸ್ಥೆಯ ಕಾರ್ಯ ಪ್ರಶಂಸನೀಯ ಎಂದು ತಿಳಿಸಿದ್ದಾರೆ.

<><*<><>*><>

ದ್ವೇಷ-ಭಾಷಣ ಮಸೂದೆಯು ವಾಕ್ ಸ್ವಾತಂತ್ರ್ಯವನ್ನು ಕಸಿದುಕೊಳ್ಳಲಿದ್ದು, ಒಪ್ಪಿಗೆ ನೀಡದಂತೆ ರಾಜ್ಯಪಾಲರನ್ನು ಒತ್ತಾಯಿಸಲಾಗುವುದು ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚರ್ಚೆಯಿಲ್ಲದೇ ಮಸೂದೆಯನ್ನು ಅಂಗೀಕರಿಸಿದ್ದಕ್ಕಾಗಿ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಕುರಿತಂತೆ ಸೋಮವಾರ ರಾಜ್ಯಪಾಲರನ್ನು ಭೇಟಿ ಮಾಡುವುದಾಗಿ ಅವರು ತಿಳಿಸಿದ್ದಾರೆ.

<><*<><>*><>

ರಂಗಾಯಣ, ಮೈಸೂರು ವತಿಯಿಂದ ಆಯೋಜಿಸಲಾಗಿರುವ ಬಹುರೂಪಿ ರಾಜ್ಯ ನಾಟಕೋತ್ಸವ-೨೦೨೬ ನಾಳೆಯಿಂದ ಮೈಸೂರಿನಲ್ಲಿ ಆರಂಭಗೊಳ್ಳಲಿದೆ. ಖ್ಯಾತ ಬರಹಗಾರ ಬರಗೂರು ರಾಮಚಂದ್ರಪ್ಪ ಬಹುರೂಪಿ ನಾಟಕೋತ್ಸವಕ್ಕೆ ಚಾಲನೆ ನೀಡಲಿದ್ದಾರೆ. ಈ ಬಾರಿ ೨೫ನೇ ವರ್ಷದ ಬೆಳ್ಳಿ ಹಬ್ಬವನ್ನು ಆಚರಿಸುತ್ತಿದ್ದು, ಈ ಹಿನ್ನೆಲೆಯಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಸ್ಮರಣಾರ್ಥ ಹಲವು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ನಾಳೆಯಿಂದ ಇದೇ ೧೮ರವರೆಗೆ ಎಂಟು ದಿನಗಳ ಕಾಲ ನಡೆಯಲಿರುವ ಈ ನಾಟಕೋತ್ಸವದಲ್ಲಿ ಒಟ್ಟು ೨೪ ನಾಟಕಗಳು ಪ್ರದರ್ಶನಗೊಳ್ಳಲಿದ್ದು, ಇದರಲ್ಲಿ ೧೨ ನಾಟಕಗಳು ವಿವಿಧ ಭಾಷೆಗಳಲ್ಲಿವೆ. ಆರು ಮಕ್ಕಳ ಬಹುರೂಪಿ ನಾಟಕಗಳು ಪ್ರದರ್ಶನಗೊಳ್ಳಲಿದ್ದು, ಅವುಗಳಲ್ಲಿ ಮೂರು ಕನ್ನಡ ಹಾಗೂ

ಮೂರು ಇಂಗ್ಲಿಷ್ ನಾಟಕಗಳು ಸೇರಿವೆ. ಕಲಾಮಂದಿರ ಆವರಣದಲ್ಲಿ ಪುಸ್ತಕ ಮೇಳ ಆಯೋಜಿಸಲಾಗಿದ್ದು, ೬೦ಕ್ಕೂ ಹೆಚ್ಚು ಮಳಿಗೆಗಳು ಭಾಗವಹಿಸಿವೆ.

<><*<><>*><>

ರಸ್ತೆ ಸುರಕ್ಷತಾ ಸಭೆಯಲ್ಲಿ ಜಿಲ್ಲಾಧಿಕಾರಿ ನೀಡಿದ ನಿರ್ದೇಶನದಂತೆ ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ಸಂಚರಿಸುವ ಎಲ್ಲಾ ಖಾಸಗಿ ಹಾಗೂ ಕೆ.ಎಸ್.ಆರ್.ಟಿ.ಸಿ ಬಸ್ಸುಗಳು ಇದೇ ೨೦ರ ಒಳಗಾಗಿ ಕಡ್ಡಾಯವಾಗಿ ಬಾಗಿಲು ಅಳವಡಿಸಿಕೊಂಡು ಸಂಚರಿಸಬೇಕು ಎಂದು ಜಿಲ್ಲಾ ಪ್ರಾದೇಶಿಕ ಸಾರಿಗೆ ಅಧಿಕಾರಿ ಸೂಚನೆ ನೀಡಿದ್ದಾರೆ. ಮರಳು, ಮಣ್ಣು, ಕೆಂಪುಕಲ್ಲು, ಶಿಲೆಕಲ್ಲು ಸಹಿತ ಖನಿಜ ವಸ್ತುಗಳನ್ನು ಸಾಗಿಸುವ ೬ ಚಕ್ರ ಮತ್ತು ಅದಕ್ಕಿಂತ ಮೇಲ್ಪಟ್ಟ ಲಾರಿ, ಟಿಪ್ಪರ್ ವಾಹನಗಳಿಗೆ ವೇಗ ನಿಯಂತ್ರಕಗಳನ್ನು ೧೦ ದಿನಗಳ ಒಳಗಾಗಿ ಕಡ್ಡಾಯವಾಗಿ ಅಳವಡಿಸುವಂತೆ ನಿರ್ದೇಶನ ನೀಡಿದ್ದಾರೆ. ನಿಯಮ ಉಲ್ಲಂಘನೆಯಾದಲ್ಲಿ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳುವುದರೊಂದಿಗೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>